37.90 ಕಿ.ಮೀ. ಗಳ ಅಭಿವೃದ್ಧಿಯನ್ನು ರೂ. 44.00 ಲಕ್ಷಗಳ ಕರ್ನಾಟಕ ರಸ್ತೆ ಅಭಿವೃದ್ಧಿ ನಿಗಮದ ಅನುದಾನದಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ ತೆಗೆದುಕೊಂಡಿದ್ದು ಕಾಮಗಾರಿಗಳು ಪ್ರಗತಿಯಲ್ಲಿವೆ.

(5) (85) ಶ್ರೀ ಧ್ರುವನಾರಾಯಣ ಆರ್. (ಸಂತೇಮಾರಳ್ಳಿ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ಚಾಮರಾಜನಗರ ಜಿಲ್ಲೆಯ ಮೀಸಲು ಅರಣ್ಯ ಪ್ರದೇಶದಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಈ ರೀತಿಯ ಗಣಿಗಾರಿಕೆಯಿಂದ ಸುಪ್ರೀಮ್ ಕೋರ್ಟ್ ಆದೇಶ ಉಲ್ಲಂಘನೆಯಾಗುವುದಿಲ್ಲವೇ;

ಇ) ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು ?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ಚಾಮರಾಜನಗರ ಜಿಲ್ಲೆಯ ಮೀಸಲು ಅರಣ್ಯ ಪ್ರದೇಶದಲ್ಲಿ ಅಕ್ರಮ ಗಣಿಗಾರಿಕೆ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ.

ಆ) ಯಾವುದೇ ಗಣಿಗಾರಿಕೆಗೆ ಪರವಾನಗಿ ನೀಡಿಲ್ಲವಾದ್ದರಿಂದ ಮಾನ್ಯ ಸರ್ವೋಚ್ಚ ನ್ಯಾಯಾಲಯದ ಆದೇಶದ ಉಲ್ಲಂಘನೆ ಉದ್ಭವಿಸುವುದಿಲ್ಲ.

ಇ) ಗಣಿ ಹಾಗೂ ಅರಣ್ಯ ಇಲಾಖೆ ಅಧಿಕಾರಿಗಳು ಕಾಲ ಕಾಲಕ್ಕೆ ಯಾವುದೇ ಗಣಿಗಾರಿಕೆ ನಡೆಯದಂತೆ ತಪಾಸಣೆ ಮಾಡಿ ನಿಗಾ ವಹಿಸುತ್ತಿದ್ದಾರೆ.

6, (86) ಶ್ರೀ ಧ್ರುವನಾರಾಯಣ ಆರ್. (ಸಂತೇಮಾರಳ್ಳಿ): ಮಾನ್ಯ ಮುಖ್ಯ ಮಂತ್ರಿಗಳು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ,

ಅ) ರೈತರ ಬೆಳೆ ಸಾಲದ ಬಡ್ಡಿಯನ್ನು ಮನ್ನಾ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಆ) ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ತೆಗೆದುಕೊಂಡಿರುವ ಕ್ರಮವೇನು?

ಶ್ರೀ ಹೆಚ್. ಡಿ. ಕುಮಾರಸ್ವಾಮಿ, ಮಾನ್ಯ ಮುಖ್ಯ ಮಂತ್ರಿಗಳು

ಅ) ದಿನಾಂಕ : 31-03-2004ಕ್ಕೆ ಹೊರಬಾಕಿ ಇರುವ ಅಲ್ಪಾವಧಿ, ಮಧ್ಯಮಾವಧಿ ಮತ್ತು ದೀರ್ಘಾವಧಿ ಕೃಷಿ ಸಾಲಗಳ ಅಸಲನ್ನು ರೈತರು ದಿನಾಂಕ : 01-03-2005ರಿಂದ ಅವಧಿಯಲ್ಲಿ ಸಂಬಂಧಪಟ್ಟ ಕೃಷಿ ಪತ್ತಿನ ಸಹಕಾರ ಸಂಘ/ಬ್ಯಾಂಕುಗಳಿಗೆ ಮರುಪಾವತಿಸಿದಲ್ಲಿ ಸದರಿ ಸಾಲಗಳ ಮೇಲಿನ ಬಡ್ಡಿ ದಂಡದ ಬಡ್ಡಿಯನ್ನು ಮನ್ನಾ ಮಾಡಿ ತತ್ಸಂಬಧವಾದ ಬಡ್ಡಿ, ದಂಡದ ಬಡ್ಡಿ ಮೊಬಲಗನ್ನು ಕೃಷಿ ಪತ್ತಿನ ಸಹಕಾರ ಸಂಘ/ಬ್ಯಾಂಕುಗಳಿಗೆ ಭರಿಸಿ ಕೊಡಲು ಮಂಜೂರಾತಿ ನೀಡಲಾಗಿರುತ್ತದೆ.